# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 766 |
| ಮಾನ್ಯ ಸದಸ್ಯರ ಹೆಸರು | ಡಾ: ತಳವಾರ್ ಸಾಬಣ್ಣ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸುವ ಸಚಿವರು | ಉನ್ನತ ಶಿಕ್ಷಣ ಸಚಿವರು |
| ಉತ್ತರಿಸಬೇಕಾದ ದಿನಾಂಕ | 26.12.2022 |

| | ಪ್ರಶ್ನೆ | ಉತ್ತರ |
|---|---|---|
| (ಅ) | ಕರ್ನಾಟಕ ರಾಜ್ಯದ ವಿಶ್ವವಿದ್ಯಾಲಯಗಳಲ್ಲಿ ಪಿ.ಎಚ್.ಡಿ. ಮಾಡುತ್ತಿರುವ ದಿವ್ಯಾಂಗ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; ಪಿ.ಎಚ್‌ಡಿ ಪ್ರವೇಶದಲ್ಲಿ ಅವರಿಗೆ ಕೇಂದ್ರ ಸರ್ಕಾರದ ಆದೇಶಾನುಸಾರ ಎಷ್ಟು ಪ್ರಮಾಣದ ಮೀಸಲಾತಿಯನ್ನು ನೀಡಲಾಗಿದೆ; | The Rights of Persons with Disabilities Act, 2016 ರ Section 32 (1) ರನ್ವಯ ದಿವ್ಯಾಂಗ ವಿದ್ಯಾರ್ಥಿಗಳಿಗೆ ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ಶೇ. 5% ರಷ್ಟು ಮೀಸಲಾತಿಯನ್ನು ಕಲ್ಪಿಸಲಾಗಿದೆ ಮತ್ತು University Grants Commission (Minimum Standards and Procedure for Award of Ph.D Degrees) Regulations, 2022 ರ ಪ್ರಕರಣ 5(3)(ii) ರನ್ವಯ ಪಿಹೆಚ್.ಡಿ ಪ್ರವೇಶಾತಿಗೆ ಮೀಸಲಾತಿ ಕುರಿತಂತೆ ಕೇಂದ್ರ ಹಾಗೂ ರಾಜ್ಯ ಸರ್ಕಾರ ಕಾಲಕಾಲಕ್ಕೆ ಹೊರಡಿಸುವ ಮಾರ್ಗಸೂಚಿಯನ್ವಯ ಮೀಸಲಾತಿಯನ್ನು ಅಳವಡಿಸಲಾಗಿರುತ್ತದೆ. |
| (ಆ) | ಪಿ.ಎಚ್.ಡಿ. ಮಾಡುತ್ತಿರುವ ದಿವ್ಯಾಂಗ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ಪ್ರೋತ್ಸಾಹ ಧನ ಮತ್ತು ಲ್ಯಾಪ್‌ಟಾಪ್ ಸೌಲಭ್ಯಗಳನ್ನು ಒದಗಿಸಲಾಗಿದೆಯೇ; | |
| (ಇ) | ಪಿ.ಎಚ್.ಡಿ. ಮಾಡಲು ದಿವ್ಯಾಂಗ ವಿದ್ಯಾರ್ಥಿಗಳಿಗೆ ಇನ್ನಿತರ ಯಾವ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದೆ. | ಉನ್ನತ ಶಿಕ್ಷಣ ಇಲಾಖೆಯಡಿ ಬರುವ ಸಾರ್ವಜನಿಕ ವಿಶ್ವವಿದ್ಯಾಲಯಗಳಲ್ಲಿ ಪಿ.ಎಚ್.ಡಿ. ಮಾಡುತ್ತಿರುವ ದಿವ್ಯಾಂಗ ವಿದ್ಯಾರ್ಥಿಗಳ ವಿವರ ಹಾಗೂ ಸದರಿಯವರಿಗೆ ಒದಗಿಸುತ್ತಿರುವ ಸೌಲಭ್ಯ ಕುರಿತಾಗಿ ಮಾಹಿತಿಯನ್ನು ಅನುಬಂಧ ದಲ್ಲಿ ಲಗತ್ತಿಸಿದೆ. |

ಸಂಖ್ಯೆ: ಇಡಿ 329 ಯುಎನ್‌ಇ 2022

(ಡಾ: ಅಶ್ವಥ್ ನಾರಾಯಣ ಸಿ.ಎನ್)
ಉನ್ನತ ಶಿಕ್ಷಣ, ಐಟಿ-ಬಿಟಿ, ವಿಜ್ಞಾನ ಮತ್ತು
ತಂತ್ರಜ್ಞಾನ, ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ
ಸಚಿವರು

# ಅನುಬಂಧ

| ಕ್ರ. ಸಂ. | ವಿಶ್ವವಿದ್ಯಾಲಯದ ಹೆಸರು | ಪಿ.ಎಚ್.ಡಿ ಮಾಡುತ್ತಿರುವ ದಿವ್ಯಾಂಗ ವಿದ್ಯಾರ್ಥಿಗಳು | ವಿದ್ಯಾರ್ಥಿ ವೇತನ, ಪ್ರೋತ್ಸಾಹ ಧನ ಮತ್ತು ಲ್ಯಾಪ್‌ಟಾಪ್ ಸೌಲಭ್ಯ ಹಾಗೂ ಇನ್ನಿತರ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿರುವ ಮಾಹಿತಿ |
|---|---|---|---|
| 1 | ವಿಜಯನಗರ ಶ್ರೀಕೃಷ್ಣದೇವರಾಯ ವಿಶ್ವವಿದ್ಯಾಲಯ | 09 | ಪ.ಜಾ/ಪ.ಪಂಗಡದ ದಿವ್ಯಾಂಗ ವಿದ್ಯಾರ್ಥಿಗಳಿಗೆ ಮಾತ್ರ ಲ್ಯಾಪ್ ಟಾಪ್ ಹಾಗೂ ಶಿಷ್ಯವೇತನವನ್ನು ನೀಡಲಾಗುತ್ತಿದೆ. |
| 2 | ಕನ್ನಡ ವಿಶ್ವವಿದ್ಯಾಲಯ | 10 | ಕೇಂದ್ರ/ರಾಜ್ಯ ಸರ್ಕಾರದಿಂದ ನೀಡುವ ವಿದ್ಯಾರ್ಥಿ ವೇತನಕ್ಕೆ ಆಯ್ಕೆಯಾಗುವ ದಿವ್ಯಾಂಗ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನವನ್ನು ನೀಡಲಾಗುತ್ತಿದೆ ಮತ್ತು ಲ್ಯಾಪ್‌ಟಾಪ್ ಸೌಲಭ್ಯಗಳನ್ನು ಒದಗಿಸಲಾಗಿದೆ. |
| 3 | ರಾಣಿ ಚನ್ನಮ್ಮ ವಿಶ್ವವಿದ್ಯಾಲಯ | 05 | • ದಿವ್ಯಾಂಗ ವಿದ್ಯಾರ್ಥಿಗಳಲ್ಲಿ ಒಬ್ಬರಿಗೆ ಮಾತ್ರ ಲ್ಯಾಪ್‌ಟಾಪ್ ಒದಗಿಸಲಾಗಿದೆ.<br>• ವಿದ್ಯಾರ್ಥಿ ವೇತನವನ್ನು ಸರ್ಕಾರದಿಂದ ನೇರವಾಗಿ ಅವರ ಉಳಿತಾಯ ಖಾತೆಗೆ ಜಮಾ ಮಾಡಲಾಗುತ್ತಿದೆ.<br>• ಸದರಿ ವಿದ್ಯಾರ್ಥಿಗಳಿಗೆ ರಾಷ್ಟ್ರೀಯ ಸೆಮಿನಾರ್‌ಗಳನ್ನು ಹಮ್ಮಿಕೊಳ್ಳಲಾಗಿದೆ. |
| 4 | ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯ | 0 | • ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾಲಯದಲ್ಲಿ ಪಿಹೆಚ್.ಡಿ ಮಾಡಲು ದಿವ್ಯಾಂಗ ವಿದ್ಯಾರ್ಥಿಗಳು ಪ್ರವೇಶ ಪಡೆದಿರುವುದಿಲ್ಲ. |
| 5 | ಗುಲ್ಬರ್ಗ ವಿಶ್ವವಿದ್ಯಾಲಯ | 01 | • ವಿಕಲಚೇತನ ವಿದ್ಯಾರ್ಥಿಗಳಿಗೆ ನಿಗದಿ ಪಡಿಸಿರುವ ವಿದ್ಯಾರ್ಥಿ ವೇತನ ನೀಡಲಾಗುತ್ತಿದೆ. ಲ್ಯಾಪ್ ಟಾಪ್ ಸೌಲಭ್ಯ ಒದಗಿಸಿರುವುದಿಲ್ಲ.<br>• ಇನ್ನಿತರೆ ಯಾವ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿರುವುದಿಲ್ಲ. |
| 6 | ಬೆಂಗಳೂರು ನಗರ ವಿಶ್ವವಿದ್ಯಾಲಯ | 0 | • ದಿವ್ಯಾಂಗ ವಿದ್ಯಾರ್ಥಿಗಳಿಗೆ ವಿಶೇಷವಾಗಿ ಯಾವುದೇ ವಿಶೇಷ ಸೌಲಭ್ಯಗಳನ್ನು ಒದಗಿಸಲಾಗುತ್ತಿಲ್ಲ. ಇತರೆ ಸಂಶೋಧನಾ ವಿದ್ಯಾರ್ಥಿಗಳಿಗೆ ನೀಡಲಾಗುತ್ತಿರುವ ಸೌಲಭ್ಯಗಳು ಇವರಿಗೂ ನೀಡಲಾಗುವುದು.<br>• ಯಾವುದೇ ವಿಶೇಷ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿರುವುದಿಲ್ಲ. |
| 7 | ಕರ್ನಾಟಕ ಜಾನಪದ ವಿಶ್ವವಿದ್ಯಾಲಯ | 0 | • ದಿವ್ಯಾಂಗ ವಿದ್ಯಾರ್ಥಿಗಳ ಸಂಖ್ಯೆ ಇರುವುದಿಲ್ಲ ಮತ್ತು ಅರ್ಜಿ ಸಲ್ಲಿಸಿರುವುದಿಲ್ಲ.<br>• ದಿವ್ಯಾಂಗ ವಿದ್ಯಾರ್ಥಿ ಇಲ್ಲದ ಕಾರಣ ಯಾವುದೇ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿರುವುದಿಲ್ಲ. |
| 8 | ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯ | 0 | • ವಿಶ್ವವಿದ್ಯಾಲಯದಲ್ಲಿ ಪಿಹೆಚ್.ಡಿ ಮಾಡುತ್ತಿರುವ ದಿವ್ಯಾಂಗ ವಿದ್ಯಾರ್ಥಿಗಳು ಇರುವುದಿಲ್ಲ.<br>• ದಿವ್ಯಾಂಗ ವಿದ್ಯಾರ್ಥಿಗಳು ಪ್ರವೇಶ ಪಡೆದಲ್ಲಿ, ವಿದ್ಯಾರ್ಥಿ ವೇತನ, ಪ್ರೋತ್ಸಾಹ ಧನ ಮತ್ತು ಲ್ಯಾಪ್ ಟಾಪ್ ಸೌಲಭ್ಯಗಳನ್ನು ಒದಗಿಸಲಾಗುವುದು ಹಾಗೂ ಆಪ್ತ ಸಮಾಲೋಚನೆ, ಕಾರ್ಯಾಗಾರ/ವಿಶೇಷ ತರಬೇತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು. |
| 9 | ತುಮಕೂರು ವಿಶ್ವವಿದ್ಯಾಲಯ | 03 | • ಯಾವುದೇ ವಿದ್ಯಾರ್ಥಿ ವೇತನ, ಪ್ರೋತ್ಸಾಹ ಧನ ಮತ್ತು ಲ್ಯಾಪ್ ಟಾಪ್ ಸೌಲಭ್ಯಗಳನ್ನು ಒದಗಿಸಲಾಗಿರುವುದಿಲ್ಲ.<br>• ಯಾವುದೇ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿರುವುದಿಲ್ಲ. |
| 10 | ದಾವಣಗೆರೆ ವಿಶ್ವವಿದ್ಯಾಲಯ | 01 | • NEPWD Fellowship ನೀಡಲಾಗುತ್ತಿದೆ.<br>• ವಿಶೇಷವಾಗಿ ಚೇರು, ಟೇಬಲ್ ವ್ಯವಸ್ಥೆಯನ್ನು ಮಾಡಿಕೊಡಲಾಗಿದೆ. |
| 11 | ಕುವೆಂಪು ವಿಶ್ವವಿದ್ಯಾಲಯ | 08 | • UGC-NEET, JRF ಹಾಗೂ NFFPWD ಇವರಿಂದ ದಿವ್ಯಾಂಗ ವಿದ್ಯಾರ್ಥಿಗಳು ಫೆಲೋಶಿಫ್ ಪಡೆಯುತ್ತಿದ್ದಾರೆ.<br>• ವಿಶ್ವವಿದ್ಯಾಲಯದ SC/ST/OBC ವಿದ್ಯಾರ್ಥಿಗಳಿಗೆ ಹಮ್ಮಿಕೊಳ್ಳಲಾಗುವ ಎಲ್ಲಾ ಪ್ರೋತ್ಸಾಹದಾಯಕ ಕಾರ್ಯಕ್ರಮಗಳನ್ನು ದಿವ್ಯಾಂಗ ವಿದ್ಯಾರ್ಥಿಗಳಿಗೂ ಸಾಧ್ಯವಾದಷ್ಟು ಮಟ್ಟಿಗೆ ವಿಸ್ತರಿಸಲಾಗುತ್ತಿದೆ. |

....2

| | | | |
|---|---|---|---|
| 12 | ಮೈಸೂರು ವಿಶ್ವವಿದ್ಯಾಲಯ | 23 | • ದಿವ್ಯಾಂಗ ವಿದ್ಯಾರ್ಥಿಗಳಿಗೆ ವೇತನ ಪ್ರೋತ್ಸಾಹ ಧನವೆಂದು ಪ.ಜಾ/ಪ.ಪಂ ಫೆಲೋಶಿಪ್, ಯುಜಿಸಿ ಫೆಲೋಶಿಪ್ ರೂಪದಲ್ಲಿ ನೀಡಲಾಗುತ್ತಿದೆ.<br>• ಸದರಿ ವಿದ್ಯಾರ್ಥಿಗಳಿಗೆ ವಸತಿ ಮತ್ತು ಊಟದ ವ್ಯವಸ್ಥೆಯನ್ನು ಉಚಿತವಾಗಿ ನೀಡಲಾಗುತ್ತಿದೆ. |
| 13 | ಬೆಂಗಳೂರು ವಿಶ್ವವಿದ್ಯಾಲಯ | 05 | • ಪ.ಜಾ-ಪ.ಪಂಗಡದ ದಿವ್ಯಾಂಗ ಸಂಶೋಧನಾ ವಿದ್ಯಾರ್ಥಿಗಳಿಗೆ ಡಾ.ಬಿ.ಆರ್. ಅಂಬೇಡ್ಕರ್ ವಿದ್ಯಾರ್ಥಿವೇತನ, ಲ್ಯಾಪ್‌ಟಾಪ್ ಪ್ರೋತ್ಸಾಹ ಧನ ಹಾಗೂ ಇತರೆ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ.<br>• ವಿದ್ಯಾರ್ಥಿನಿಲಯಗಳಲ್ಲಿ ಸೌಕರ್ಯ ಪಡೆದಿರುವ ದಿವ್ಯಾಂಗ ವಿದ್ಯಾರ್ಥಿಗಳಿಗೆ ಉಚಿತ ಊಟ ಮತ್ತು ವಸತಿ ನೀಡಲಾಗುತ್ತಿದೆ.<br>• ವಿದ್ಯಾರ್ಥಿಗಳ ಅನುಕೂಲಕ್ಕಾಗಿ ವಿಶ್ವವಿದ್ಯಾಲಯದ ಆವರಣದಲ್ಲಿ ವಿಶೇಷ ಚೇತನರ ಸಬಲೀಕರಣ ಘಟಕವನ್ನು ಸ್ಥಾಪಿಸಲಾಗಿದೆ. |
| 14 | ಕರ್ನಾಟಕ ರಾಜ್ಯ ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯ | ಕರ್ನಾಟಕ ರಾಜ್ಯ ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯಕ್ಕೆ ಅನ್ವಯಿಸುವುದಿಲ್ಲ. | |
| 15 | ಕರ್ನಾಟಕ ವಿಶ್ವವಿದ್ಯಾಲಯ | 01 | • ಯಾವುದೇ ವಿದ್ಯಾರ್ಥಿ ವೇತನ, ಪ್ರೋತ್ಸಾಹ ಧನ ಮತ್ತು ಲ್ಯಾಪ್ ಟಾಪ್ ಸೌಲಭ್ಯಗಳನ್ನು ಒದಗಿಸಲಾಗಿರುವುದಿಲ್ಲ.<br>• ವಿಶ್ವವಿದ್ಯಾಲಯದ ಆವರಣದಲ್ಲಿ ಸುಮಾರು 5 ಲಕ್ಷ ರೂ.ಗಳ ವೆಚ್ಚದಲ್ಲಿ ಬ್ರೈಲ್ ಸಂಪನ್ಮೂಲ ಕೇಂದ್ರವನ್ನು ಸ್ಥಾಪಿಸಲಾಗಿದೆ. ಅಂದ ವಿದ್ಯಾರ್ಥಿಗಳಿಗೆ ಬ್ರೈಲ್ ಲಿಪಿಯಲ್ಲಿ ಮುದ್ರಿಸಿಕೊಳ್ಳಲು ಮುದ್ರಣ ಯಂತ್ರವನ್ನು ಅಳವಡಿಸಲಾಗಿದೆ.<br>• ಅಧ್ಯಯನ ಸಾಮಗ್ರಿಗಳನ್ನು ಸ್ಕ್ಯಾಕ್ ಮಾಡಿಕೊಳ್ಳಲು ಮತ್ತು OCR ಮಾಡಿಕೊಳ್ಳಲು ಅನುಕೂಲ ಕಲ್ಪಿಸಲಾಗಿದೆ.<br>• ದೃಷ್ಟಿಮಾಂದ್ಯ ವಿದ್ಯಾರ್ಥಿಗಳಿಗೆ ಓದಲು ಪೂರಕವಾಗುವಂತಹ Zoom Magnifier and Reader ಅಳವಡಿಸಲಾಗಿದೆ.<br>• Accessible Digital ಗ್ರಂಥಾಲಯ ಸೌಲಭ್ಯವನ್ನು ಕಲ್ಪಿಸಲಾಗಿದೆ. |
| 16 | ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯ | 0 | • ವಿಶ್ವವಿದ್ಯಾಲಯದಲ್ಲಿ ದಿವ್ಯಾಂಗ ವಿದ್ಯಾರ್ಥಿ ಪಿಹೆಚ್.ಡಿ ಪ್ರವೇಶಾತಿ ಪಡೆದಿರುವುದಿಲ್ಲ.<br>• ದಿವ್ಯಾಂಗ ವಿದ್ಯಾರ್ಥಿಗಳು ಪಿಹೆಚ್.ಡಿ ಪ್ರವೇಶ ಪಡೆದರೆ ನಿಯಮಾನುಸಾರ ವಿದ್ಯಾರ್ಥಿ ವೇತನ, ಪ್ರೋತ್ಸಾಹಧನ ಮತ್ತು ಲ್ಯಾಪ್ ಟಾಪ್ ಸೌಲಭ್ಯಗಳನ್ನು ಒದಗಿಸಲಾಗುವುದು ಹಾಗೂ ನಿಯಮಾನುಸಾರ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುವುದು. |
| 17 | ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ | 0 | • ವಿಶ್ವವಿದ್ಯಾಲಯದಲ್ಲಿ ಪ್ರಸ್ತುತ ಸಾಲಿನಲ್ಲಿ ದಿವ್ಯಾಂಗ ಸಂಶೋಧನಾ ವಿದ್ಯಾರ್ಥಿಗಳು ಇರುವುದಿಲ್ಲ.<br>• VTU Regulations Governing The Degree of Doctor of Philosophy (Ph.D) – 2020 ರ ನಿಯಮಾವಳಿಗಳಲ್ಲಿ ಒಳಗೊಂಡಿರುವ Research Supervisor/Co-Supervisor ಷರತ್ತುಗಳನ್ನು ಪಾಲಿಸಲಾಗುತ್ತಿದೆ.<br>• ಪಿಹೆಚ್.ಡಿ ವಿದ್ಯಾರ್ಥಿಗಳಿಗೆ ರೂ.25,000/ ಗಳ ಗೌರವಧನವನ್ನು ನೀಡಲಾಗುತ್ತಿದೆ. ಪಿಹೆಚ್.ಡಿ ದಿವ್ಯಾಂಗ ವಿದ್ಯಾರ್ಥಿಗಳಿಗೆ ಈ ಗೌರವಧನದೊಂದಿಗೆ ಹೆಚ್ಚುವರಿಯಾಗಿ ರೂ.2,000/- ಗಳನ್ನು ನೀಡಲಾಗುತ್ತಿದೆ. |
| 18 | ಬೆಂಗಳೂರು ಉತ್ತರ ವಿಶ್ವವಿದ್ಯಾಲಯ | 0 | • ವಿಶ್ವವಿದ್ಯಾಲಯವು ಬೆಂಗಳೂರು ವಿಶ್ವವಿದ್ಯಾಲಯದಿಂದ ತ್ರಿಭಜನೆಗೊಂಡು 2018-19ನೇ ಶೈಕ್ಷಣಿಕ ಸಾಲಿನಿಂದ ಪ್ರಾರಂಭಗೊಂಡಿದೆ. ಆದ್ದರಿಂದ, ಪಿಹೆಚ್.ಡಿ ಪ್ರವೇಶಾತಿ ಆಗಿರುವುದಿಲ್ಲ.<br>• ಪಿಹೆಚ್.ಡಿ ಪ್ರವೇಶಾತಿ ಸಂದರ್ಭದಲ್ಲಿ ದಿವ್ಯಾಂಗ ವಿದ್ಯಾರ್ಥಿಗಳಿಗೆ ಕೇಂದ್ರ ಸರ್ಕಾರದ ಆದೇಶಾನುಸಾರ ಮೀಸಲಾತಿಯನ್ನು ಅನುಸರಿಸಲಾಗುವುದು. |

| | | | |
|---|---|---|---|
| 19 | ಮಂಗಳೂರು ವಿಶ್ವವಿದ್ಯಾಲಯ | 08 | • ಯಾವುದೇ ವಿದ್ಯಾರ್ಥಿ ವೇತನ, ಪ್ರೋತ್ಸಾಹ ಧನ ಮತ್ತು ಲ್ಯಾಪ್ ಟಾಪ್ ಸೌಲಭ್ಯಗಳನ್ನು ಒದಗಿಸಲಾಗಿರುವುದಿಲ್ಲ.<br>• ಸದರಿ ವಿದ್ಯಾರ್ಥಿಗಳಿಗೆ ಸಾಂಸ್ಕೃತಿಕ ಕ್ರೀಡಾಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಮತ್ತು ಓಡಾಟಕ್ಕೆ ಅನುಕೂಲವಾಗುವಂತೆ Ramp ವ್ಯವಸ್ಥೆ ಮಾಡಲಾಗಿದೆ. |
| 20 | ರಾಯಚೂರು ವಿಶ್ವವಿದ್ಯಾನಿಲಯ | 0 | ವಿಶ್ವವಿದ್ಯಾಲಯವು ನೂತನವಾಗಿ ಸ್ಥಾಪನೆಯಾಗಿದ್ದು, ಇನ್ನು ಪಿಹೆಚ್.ಡಿ ವಿದ್ಯಾರ್ಥಿಗಳ ಪ್ರವೇಶಾತಿ ಆಗಿರುವುದಿಲ್ಲ. |
| 21 | ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾನಿಲಯ | 0 | ವಿಶ್ವವಿದ್ಯಾಲಯದಲ್ಲಿ ಇದುವರೆಗೂ ಪಿಹೆಚ್.ಡಿ ಪದವಿಯನ್ನು ಪ್ರಾರಂಭಿಸಿರುವುದಿಲ್ಲ. |
| 22 | ನೃಪತುಂಗ ವಿಶ್ವವಿದ್ಯಾನಿಲಯ | 0 | ವಿಶ್ವವಿದ್ಯಾಲಯದಲ್ಲಿ ಪಿಹೆಚ್.ಡಿ ಮಾಡುತ್ತಿರುವ ವಿದ್ಯಾರ್ಥಿಗಳು ಇರುವುದಿಲ್ಲ. |
| 23 | ಮಂಡ್ಯ ವಿಶ್ವವಿದ್ಯಾನಿಲಯ | 0 | ವಿಶ್ವವಿದ್ಯಾಲಯದಲ್ಲಿ ಪಿಹೆಚ್.ಡಿ ಮಾಡುತ್ತಿರುವ ವಿದ್ಯಾರ್ಥಿಗಳು ಇರುವುದಿಲ್ಲ. |
| 24 | ಡಾ: ಅಂಬೇಡ್ಕರ್ ಸ್ಕೂಲ್ ಆಫ್ ಎಕನಾಮಿಕ್ಸ್, | 0 | ವಿಶ್ವವಿದ್ಯಾಲಯದಲ್ಲಿ ಪಿಹೆಚ್.ಡಿ ಕೋರ್ಸ್ ಪ್ರಾರಂಭವಾಗದ ಕಾರಣ ದಿವ್ಯಾಂಗ ವಿದ್ಯಾರ್ಥಿಗಳ ಪ್ರವೇಶಾತಿ ಹಾಗೂ ಅವರಿಗೆ ಇನ್ನಿತರ ಸೌಲಭ್ಯಗಳನ್ನು ಒದಗಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿರುವುದಿಲ್ಲ. |